Akashvani : Bengaluru
National Bulletin In Kannada
03.10.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

1. ವಿಕಸಿತ ಭಾರತದ ಗುರಿ ಸಾಧನೆಗೆ ಶೇಕಡಾ ಲರಷ್ಟು ಜಿಡಿಪಿ ಬೆಳವಣಿಗೆ ಅಗತ್ಯ - ಸಚಿವೆ ನಿರ್ಮಲಾ ಸೀತಾರಾಮನ್
2. ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಜೊತೆ ಸಚಿವ ಪಿಯೂಷ್ ಗೋಯಲ್ ಸಮಾಲೋಚನೆ
3. ನಾವೀನ್ಯತೆಯಲ್ಲಿ ಭಾರತ ಜಾಗತಿಕ ನಾಯಕ - ಮೈಕ್ರೋಸಾಫ್ಟ್ ಸಹ ಸಂಸ್ಥಾಪಕ ಬಿಲ್‌ಗೇಟ್ಸ್
4. ಅಹಮದಾಬಾದ್ ಟೆಸ್ಟ್ ಕ್ರಿಕೆಟ್ ; ಬೃಹತ್ ಮೊತ್ತದತ್ತ ಭಾರತ, ಶತಕ ದಾಖಲಿಸಿದ ಕೆ.ಎಲ್.ರಾಹುಲ್

***************

ವಿಕಸಿತ ಭಾರತದ ಗುರಿ ತಲುಪಲು ಶೇಕಡಾ ಲರಷ್ಟು ಜಿಡಿಪಿ ಬೆಳವಣಿಗೆಯ ಅಗತ್ಯವಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.ನವದೆಹಲಿಯಲ್ಲಿಂದು ಕೌಟಿಲ್ಯ ಆರ್ಥಿಕ ಸಮಾವೇಶ ಉದ್ಘಾಟಿಸಿ ಮಾತನಾಡಿ, ಜಾಗತಿಕ ಏರಿಳಿತದ ನಡುವೆಯೂ ದೇಶದ ಬೆಳವಣಿಗೆಯು ಅದರ ದೇಶೀಯ ಅಂಶಗಳಲ್ಲಿ ದೃಢವಾಗಿ ನೆಲೆಗೊಂಡಿದೆ. ಜಾಗತಿಕ ಆಘಾತಗಳನ್ನು ಹೀರಿಕೊಳ್ಳುವ ದೇಶದ ಸಾಮರ್ಥ್ಯ ಪ್ರಬಲವಾಗಿದೆ ಎಂದು ಅವರು ಹೇಳಿದರು. ಭಾರತೀಯ ಆರ್ಥಿಕತೆಯು ಸುಸ್ಥಿರವಾಗಿ ಬೆಳೆಯುತ್ತಲೇ ಇದೆ. ಜಾಗತಿಕವಾಗಿ ಭೌಗೋಳಿಕ ರಾಜಕೀಯ ಸಂಘರ್ಷಗಳು ತೀವ್ರಗೊಳ್ಳುತ್ತಿವೆ. ಪ್ರಸ್ತುತ ಅಗತ್ಯಗಳನ್ನು ಪೂರೈಸಲು ಜಾಗತಿಕ ಸಂಸ್ಥೆಗಳಲ್ಲಿ ಸುಧಾರಣೆಗಳಾಗಬೇಕು ಎಂದು ಪ್ರತಿಪಾದಿಸಿದರು.

***************

ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ ತಿಂಗಳು ೨೨ ರಂದು ಘೋಷಿಸಿದ ಜಿಎಸ್‌ಟಿ ಬಚತ್ ಉತ್ಸವದಿಂದ ಸಮಾಜದ ಎಲ್ಲಾ ವರ್ಗಗಳಿಗೆ ಪ್ರಯೋಜನ ದೊರೆಯುತ್ತಿದೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ದೇಶದ ಪರೋಕ್ಷ ತೆರಿಗೆ ವ್ಯವಸ್ಥೆಯನ್ನು ಸರಳಗೊಳಿಸುವತ್ತ ಇದು ಮಹತ್ವದ ಹೆಜ್ಜೆಯಾಗಿದೆ.  ಸುಧಾರಣೆಗಳು ವಿವಿಧ ಸರಕು ಮತ್ತು ಸೇವೆಗಳ ಮೇಲಿನ ತೆರಿಗೆ ದರವನ್ನು ಕಡಿಮೆ ಮಾಡುವ ಮೂಲಕ ನಾಗರಿಕರಿಗೆ ಗಣನೀಯ ಪರಿಹಾರ  ನೀಡುತ್ತಿವೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಅಡಿಯಲ್ಲಿ, ಗ್ರಾಹಕರಿಗೆ ಪರಿಹಾರ ನೀಡುವ ಸಲುವಾಗಿ ಸರ್ಕಾರ ಸಣ್ಣ ಕಾರುಗಳ ಮೇಲಿನ ತೆರಿಗೆ ದರವನ್ನು ಶೇಕಡಾ ೧೮ ರಿಂದ ಶೇಕಡಾ ೨೮ ಕ್ಕೆ ಇಳಿಸಿದೆ. ಈ ಕ್ರಮವು ಮಧ್ಯಮ ವರ್ಗದ ಕುಟುಂಬಗಳ ಮೇಲಿನ ಆರ್ಥಿಕ ಒತ್ತಡವನ್ನು ಕಡಿಮೆ ಮಾಡುತ್ತಿದೆ. ಇದರಿಂದ ಸಣ್ಣ ನಗರಗಳು ಮತ್ತು ಪಟ್ಟಣಗಳಲ್ಲಿ ಸಣ್ಣ ಕಾರುಗಳ ಮಾರಾಟವನ್ನು ಉತ್ತೇಜಿಸಿದಂತಾಗಿದೆ.  ಏತನ್ಮಧ್ಯೆ ಜಿಎಸ್‌ಟಿ ಕೌನ್ಸಿಲ್ ೩೫೦ ಸಿಸಿ ವರೆಗಿನ ದ್ವಿಚಕ್ರ ವಾಹನಗಳ ಮೇಲಿನ ತೆರಿಗೆ ದರವನ್ನು ಶೇಕಡಾ ೧೮ ಕ್ಕೆ ಇಳಿಸಿದೆ. ಇದು ಮೊದಲು ಶೇಕಡಾ ೨೮ ತೆರಿಗೆ ಸ್ಲ್ಯಾಬ್‌ನ ಭಾಗವಾಗಿತ್ತು. ತೆರಿಗೆ ಕಡಿತವು ಖರೀದಿದಾರರಿಗೆ ಮಾತ್ರ ಪ್ರಯೋಜನವನ್ನು ನೀಡುವುದಲ್ಲದೆ, ಉತ್ಪಾದನೆ ಮತ್ತು ಸಂಬಂಧಿತ ವಲಯಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿದೆ. ಹೊಸ ಜಿ.ಎಸ್.ಟಿ ದರಗಳು ಜಾರಿಗೆ ಬರುತ್ತಿದ್ದಂತೆ, ಸರ್ಕಾರವು ರಾಷ್ಟ್ರಗಳ ಆರ್ಥಿಕತೆಯ ಮೇಲೆ ಅಲೆಯ ಪರಿಣಾಮವನ್ನು ಬೀರುತ್ತದೆ.

***************

ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಇಂದು ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರನ್ನು ಭೇಟಿ ಮಾಡಿ, ಉಭಯ ರಾಷ್ಟ್ರಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯ ಬಗ್ಗೆ ಚರ್ಚೆ ನಡೆಸಿದರು.ಈ ಕುರಿತಂತೆ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು  "ಕೈಗಾರಿಕಾ ಪಾರ್ಕ್ ಅಭಿವೃದ್ಧಿಯಿಂದ ಕೃತಕ ಬುದ್ಧಿ ಮತ್ತೆಯಂತಹ ಉದಯೋನ್ಮುಖ ತಂತ್ರಜ್ಞಾನದವರೆಗೆ ಆರ್ಥಿಕ ಪಾಲುದಾರಿಕೆಯನ್ನು ಹೆಚ್ಚಿಸುವ  ಬಗ್ಗೆ ಚರ್ಚೆ ನಡೆಯಿತು ಎಂದು ಹೇಳಿದ್ದಾರೆ. ಗೋಯಲ್ ಸಿಂಗಾಪುರ್ ಏರ್ಲೈನ್ಸ್ ಎಂಜಿನಿಯರಿಂಗ್ ಕಂಪನಿಯ

ಸಿಇಒ ಚಿನ್ ಯೌ ಸೆಂಗ್ ಅವರನ್ನು ಭೇಟಿಯಾಗಿ ವಾಯುಯಾನ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಷ ಪರೀಕ್ಷಾ ವಲಯದಲ್ಲಿ ಭಾರತ-ಸಿಂಗಾಪುರ ದೇಶಗಳ ನಡುವಿನ ಸಹಕಾರವನ್ನು ಬಲಪಡಿಸುವ ಬಗ್ಗೆ ಚರ್ಚಿಸಿದರು.

***************

ಬಿಹಾರದಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಹೇಳಿದ್ದು, ಈ ಸಂಬಂಧ ರೆಡ್ ಅಲರ್ಟ್ ಮುನ್ನೆಚ್ಚರಿಕೆ ನೀಡಿದೆ. ಛತ್ತೀಸ್‌ಗಢ, ಮಧ್ಯಪ್ರದೇಶ, ಪೂರ್ವ ಉತ್ತರ ಪ್ರದೇಶ, ಜಾರ್ಖಂಡ್, ಒಡಿಶಾ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ ಈಶಾನ್ಯ ಭಾರತದಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿ ಆಂಧ್ರಪ್ರದೇಶ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲೂ ಭಾರೀ ಮಳೆಯಾಗುವ ಸಂಭವವಿದೆ. ಈ ಮಧ್ಯೆ, ಪೂರ್ವ ಉತ್ತರ ಪ್ರದೇಶ, ಕರ್ನಾಟಕದ ಒಳನಾಡು, ಉಪ ಹಿಮಾಲಯ, ಪಶ್ಚಿಮ ಬಂಗಾಳ, ತೆಲಂಗಾಣ ಮತ್ತು ಪೂರ್ವ ರಾಜಸ್ಥಾನದಲ್ಲಿ ಇಂದು ಮಿಂಚು ಮತ್ತು ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಂಭವವಿದೆ.

***************

ಅಮೆರಿಕದೊಂದಿಗಿನ ವ್ಯಾಪಾರ ಮಾತುಕತೆಗಳಲ್ಲಿ ಭಾರತದ ವಿಧಾನವು ಸಮರ್ಪಕವಾಗಿದೆ ಎಂದು ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮೀಸನ್ ಗ್ರೀರ್ ಹೇಳಿದ್ದಾರೆ. ಎರಡೂ ದೇಶಗಳು ಈ ನಿಟ್ಟಿನಲ್ಲಿ ಒಪ್ಪಂದ ಮಾಡಿಕೊಳ್ಳಲು ಪ್ರಯತ್ನಿಸುತ್ತಿವೆ ಎಂದಿದ್ದಾರೆ. ನ್ಯೂಯಾರ್ಕ್‌ನ ಎಕನಾಮಿಕ್ ಕ್ಲಬ್‌ನಲ್ಲಿ ಅವರು ಮಾತನಾಡಿ, ಭಾರತದೊಂದಿಗೆ ನಡೆಯುತ್ತಿರುವ ಮಾತುಕತೆಗಳ ಬಗ್ಗೆ ಪ್ರಸ್ತಾಪಿಸಿದರು. ಅಮೆರಿಕವು ಸಾರ್ವಭೌಮ ರಾಷ್ಟ್ರಕ್ಕೆ ನಿಯಮಗಳನ್ನು ನಿರ್ದೇಶಿಸಲು ಪ್ರಯತ್ನಿಸುತ್ತಿಲ್ಲ ಎಂದು ಪ್ರತಿಪಾದಿಸಿದರು. ಉಕ್ರೇನ್‌ನಲ್ಲಿ ಯುದ್ಧವನ್ನು ಕೊನೆಗೊಳಿಸುವ ಅಮೆರಿಕದ ಉದ್ದೇಶವನ್ನು ನವದೆಹಲಿ ಅರ್ಥಮಾಡಿಕೊಂಡಿದೆ ಮತ್ತು ಈಗಾಗಲೇ ತನ್ನ ಇಂಧನ ಅಗತ್ಯಗಳನ್ನು ವೈವಿಧ್ಯಗೊಳಿಸುತ್ತಿದೆ ಎಂದರು.

***************

ಭಾರತ ನಾವೀನ್ಯತೆಯಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಿದ್ದು, ಜಗತ್ತಿನ ಕೋಟ್ಯಾಂತರ ಜನರ ಸಮಸ್ಯೆಗಳಿಗೆ ಪರಿಹಾರ ದೊರಕಿಸಿ ಕೊಡುತ್ತಿದೆ ಎಂದು ಮೈಕ್ರೋಸಾಫ್ಟ್ ಸಹ ಸಂಸ್ಥಾಪಕ ಬಿಲ್‌ಗೇಟ್ಸ್ ಹೇಳಿದ್ದಾರೆ. ಗೇಟ್ಸ್ ಫೌಂಡೇಶನ್ ಸಹಯೋಗದಲ್ಲಿ ಭಾರತೀಯ ರಾಯಭಾರ ಕಚೇರಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶವಾಗಿ ಪರಿವರ್ತನೆಯಾಗುವ ವಿಶ್ವಾಸವಿದೆ ಎಂದು ಹೇಳಿದ್ದಾರೆ. ಮಹಾತ್ಮ ಗಾಂಧೀಜಿ ಅವರ ೧೫೬ನೇ ಜಯಂತಿ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಇಲ್ಲಿ ಭಾರತೀಯ ಸಂಸ್ಕೃತಿ, ಕಲೆ, ಪರಂಪರೆಯನ್ನು ಪ್ರತಿಬಿಂಬಿಸುವ ವಿಶೇಷತೆಗಳಿಗೆ ಆದ್ಯತೆ ನೀಡಲಾಗಿತ್ತು.

***************

ಡಿಸೆಂಬರ್ ಆದಿ ಭಾಗದಲ್ಲಿ ಭಾರತಕ್ಕೆ ಭೇಟಿ ನೀಡಲು ಕಾತರದಿಂದ ಕಾಯುತ್ತಿರುವುದಾಗಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ. ತಮ್ಮ ಆತ್ಮೀಯ ಸ್ನೇಹಿತ ಮತ್ತು ರಷ್ಯಾದ ವಿಶ್ವಾಸಾರ್ಹ ಪಾಲುದಾರ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಭೇಟಿಗಾಗಿ ಎದುರು ನೋಡುತ್ತಿರುವುದಾಗಿ ಅವರು ತಿಳಿಸಿದ್ದಾರೆ. ಸೋಚಿಯಲ್ಲಿ ನಿನ್ನೆ ನಡೆದ ೨೦೨೫ ರ ಸಭೆಯಲ್ಲಿ ಮಾತನಾಡಿದ ರಷ್ಯಾ ಅಧ್ಯಕ್ಷ ಪುಟಿನ್, ನವದೆಹಲಿಯೊಂದಿಗಿನ ಮಾಸ್ಕೋದ ದೀರ್ಘಕಾಲದ ನಂಬಿಕೆಯನ್ನು ಪುನರುಚ್ಚರಿಸಿದರು ಹಾಗೂ ಪ್ರಧಾನಿ ಮೋದಿ ಅವರನ್ನು ತಮ್ಮ ರಾಷ್ಟ್ರದ ಹಿತಾಸಕ್ತಿಗಳ ಕಡೆಗೆ ಬಲವಾಗಿ ಗಮನಹರಿಸುವ ಅತ್ಯಂತ ಸಮಂಜಸ, ಬುದ್ಧಿವಂತ ನಾಯಕ ಎಂದು ಬಣ್ಣಿಸಿದರು.

***************

ಸಾಮಾಜಿಕ ಭದ್ರತೆಯಲ್ಲಿ ಅತ್ಯುತ್ತಮ ಸಾಧನೆಗಾಗಿ ಭಾರತಕ್ಕೆ ಪ್ರತಿಷ್ಠಿತ ಅಂತಾರಾಷ್ಟ್ರೀಯ ಸಾಮಾಜಿಕ ಭದ್ರತಾ ಸಂಘದ ಪ್ರಶಸ್ತಿ ಸಂದಿದೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್ಸುಖ್ ಮಾಂಡವಿಯಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಈ ವಿಷಯ ತಿಳಿಸಿದ್ದಾರೆ. ಪ್ರತಿಯೊಬ್ಬ ನಾಗರಿಕನಿಗೂ ಸಾಮಾಜಿಕ ಕಲ್ಯಾಣವನ್ನು ಖಾತ್ರಿಪಡಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಯತ್ನಗಳಿಗೆ ಈ ಪುರಸ್ಕಾರ ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

***************

ವಿಯೆಟ್ನಾಂನಲ್ಲಿ ಬುವಾಲೋಯ್ ಚಂಡಮಾರುತದಿಂದ ಸಾವನ್ನಪ್ಪಿದವರ ಸಂಖ್ಯೆ ೫೧ ಕ್ಕೆ ಏರಿದೆ. ಸರ್ಕಾರದ ವಿಪತ್ತು ನಿರ್ವಹಣಾ ಸಂಸ್ಥೆಯ ವರದಿಯ ಪ್ರಕಾರ, ಭಾರೀ ಮಳೆ ಮತ್ತು ಪ್ರವಾಹದಿಂದ ೧೪ ಜನ ಕಾಣೆಯಾಗಿದ್ದು, ೧೯೪ ಜನರು

ಗಾಯಗೊಂಡಿದ್ದಾರೆ. ಚಂಡ ಮಾರುತದಿಂದ ಭಾರಿ ಸಮುದ್ರ ಅಲೆಗಳು, ಬಲವಾದ ಗಾಳಿ ಮತ್ತು ಭಾರೀ ಮಳೆಯಾಗುತ್ತಿದೆ. ಚಂಡಮಾರುತದಿಂದ ಉಂಟಾದ ಆಸ್ತಿ ಹಾನಿ ೪೩೫ ದಶಲಕ್ಷ ಡಾಲರ್‌ಗಳಿಗಿಂತ ಹೆಚ್ಚು ಎಂದು ಸಂಸ್ಥೆ ತಿಳಿಸಿದೆ.

***************

ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಮುಖ್ಯಮಂತ್ರಿ ಮಹಿಳಾ ರೋಜ್‌ಗಾರ್ ಯೋಜನೆಯಡಿಯಲ್ಲಿ ಇಂದು ೨೫ಲಕ್ಷ ಮಹಿಳಾ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ತಲಾ ೧೦ ಸಾವಿರ ರೂಪಾಯಿಗಳನ್ನು ವರ್ಗಾಯಿಸಲಿದ್ದಾರೆ. ಬಿಹಾರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಪರಿಚಯಿಸಲಾದ ಈ ಯೋಜನೆಯು ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿ, ಸಬಲೀಕರಣಗೊಳಿಸುವ ಮತ್ತು ವಲಸೆ ತಡೆಯುವ ಗುರಿ ಹೊಂದಿದೆ.

***************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಭಾರತ - ವೆಸ್ಟ್ ಇಂಡೀಸ್ ನಡುವಿನ ಮೊದಲ ಕ್ರಿಕೆಟ್ ಟೆಸ್ಟ್ ಪಂದ್ಯದ ಎರಡನೇ ದಿನದಾಟ ಪ್ರಗತಿಯಲ್ಲಿದೆ. ಭಾರತ ಬೃಹತ್ ಮೊತ್ತ ದಾಖಲಿಸುವತ್ತ ಮುನ್ನಡೆದಿದೆ. ಕೆ.ಎಲ್.ರಾಹುಲ್ ಆಕರ್ಷಕ ಶತಕ ದಾಖಲಿಸಿದ್ದು, ಅವರಿಗೆ ವಿಕೆಟ್ ಕೀಪರ್  ದ್ರುವ್‌ಜುರೆಲ್ ಜೊತೆಯಾಗಿದ್ದಾರೆ. ಇದು ಕೆ.ಆರ್.ರಾಹುಲ್ ಅವರ ೧೧ನೇ ಟೆಸ್ಟ್ ಶತಕವಾಗಿದ್ದು, ಭಾರತದ ನೆಲದಲ್ಲಿ ಎರಡನೆಯ ಶತಕವಾಗಿದೆ. ವೆಸ್ಟ್‌ಇಂಡೀಸ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೬೨ ರನ್‌ಗಳಿಗೆ ಆಲ್‌ಔಟ್ ಆಯಿತು. ಇಂದು ಬ್ಯಾಟಿಂಗ್ ಮುಂದುವರೆಸಿರುವ ಭಾರತ ಇತ್ತೀಚಿನ ವರದಿ ಬಂದಾಗ  4 ವಿಕೆಟ್ ನಷ್ಟಕ್ಕೆ 273ರನ್‌ಗಳಿಸಿ ಆಡುತ್ತಿದೆ.

******END******